## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 590 |
| ಸದಸ್ಯರ ಹೆಸರು | ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 11.03.2025 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |

| ಕ್ರ. ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ಪರಿಶೀಲಿಸಲು ಮತ್ತು ಮೇಲ್ವಿಚಾರಣೆ ಕುರಿತು ಸರ್ಕಾರವು ಕೈಗೊಂಡಿರುವ ಕ್ರಮಗಳೇನು; | • ದಿನಾಂಕ 01.12.2021 ರಂದು ಕರ್ನಾಟಕ ಉಪಖನಿಜ (ತಿದ್ದುಪಡಿ) ರಿಯಾಯಿತಿ ನಿಯಮಗಳು, 2021 ನ್ನು ಜಾರಿಗೆ ತರಲಾಗಿರುತ್ತದೆ. ಸದರಿ ನಿಯಮ 31-R ರಂತೆ ಮರಳು ಗಣಿಗಾರಿಕೆಗೆ ಅನುಮತಿ, ಅನಧಿಕೃತ ಗಣಿಗಾರಿಕೆ ಚಟುವಟಿಕೆಗಳ ನಿಯಂತ್ರಣ ಮತ್ತು ಇತರೆ ಮರಳು ಗಣಿಗಾರಿಕೆಗೆ ವಿಷಯಗಳಿಗೆ ಸಂಬಂಧಿಸಿದಂತೆ ಉಸ್ತುವಾರಿ ಮಾಡಲು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮರಳು ಸಮಿತಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮರಳು ಸಮಿತಿಯನ್ನು ರಚಿಸಲಾಗಿರುತ್ತದೆ.<br>• ಮೇಲ್ಕಂಡ ಸಮಿತಿಯಲ್ಲಿ ಕಂದಾಯ, ಪೊಲೀಸ್, ಅರಣ್ಯ, ಲೋಕೋಪಯೋಗಿ, ಜಿಲ್ಲಾ ಪಂಚಾಯತ್, ಗಣಿ ಮತ್ತು ಭೂವಿಜ್ಞಾನ, ಪ್ರಾದೇಶಿಕ ಸಾರಿಗೆ ಇಲಾಖೆ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಜಲ ಸಂಪನ್ಮೂಲ ಮತ್ತು ಸಣ್ಣ ನೀರಾವರಿ ಇಲಾಖೆಯ ಅಧಿಕಾರಿಗಳು ಸದಸ್ಯರುಗಳಾಗಿರುತ್ತಾರೆ. ಸದರಿ ಇಲಾಖೆಯ ಅಧಿಕಾರಿಗಳು ಜಿಲ್ಲಾ ವ್ಯಾಪ್ತಿಯಲ್ಲಿ ಮರಳು ಗಣಿಗಾರಿಕೆ ಚಟುವಟಿಕೆಗಳ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಕಾರ್ಯ ನಿರ್ವಹಿಸುತ್ತಾರೆ.<br>• ಮುಂದುವರೆದು, ಕರ್ನಾಟಕ ಉಪಖನಿಜ (ತಿದ್ದುಪಡಿ) ರಿಯಾಯಿತಿ ನಿಯಮಗಳು, 2021 ರ ನಿಯಮ 31-S ರಲ್ಲಿ ಮರಳು ಗಣಿಗಾರಿಕೆಯ ಕಾರ್ಯಕ್ಷಮತೆ, ಅನಧಿಕೃತ ಮರಳು ಗಣಿಗಾರಿಕೆ, ದಾಸ್ತಾನು ಮತ್ತು ಸಾಗಾಣಿಕೆ ಸಂಬಂಧ ಕೈಗೊಂಡ ಕ್ರಮಗಳ ಪರಿಶೀಲನೆ ಹಾಗೂ ಶಾಸನಬದ್ಧ ನಿಬಂಧನೆಗಳು ಮತ್ತು ನಿಯಮಗಳ ಸಮರ್ಪಕ ಅನುಷ್ಠಾನಕ್ಕೆ ಅಗತ್ಯ ಮಾರ್ಗಸೂಚಿಗಳನ್ನು ನೀಡುವ ಸಲುವಾಗಿ ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ, ಮಹಾನಿರ್ದೇಶಕರು ಮತ್ತು ಆರಕ್ಷಕ ಮಹಾನಿರೀಕ್ಷಕರು, ಕರ್ನಾಟಕ ಸರ್ಕಾರ ಹಾಗೂ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಜಲಸಂಪನ್ಮೂಲ ಇಲಾಖೆ, ಸಣ್ಣ ನೀರಾವರಿ ಇಲಾಖೆ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು / ಪ್ರಧಾನ ಕಾರ್ಯದರ್ಶಿಯವರು / ಕಾರ್ಯದರ್ಶಿಯವರುಗಳು, ಆಯುಕ್ತರು, ಸಾರಿಗೆ ಇಲಾಖೆ, ಸದಸ್ಯ-ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ವ್ಯವಸ್ಥಾಪಕ - |

. . . 2

-ನಿರ್ದೇಶಕರು, ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತ, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಖನಿಜ ನಿಗಮ ನಿಯಮಿತ, ನಿರ್ದೇಶಕರು, ಅಂತರ್ಜಲ ನಿರ್ದೇಶನಾಲಯ ಹಾಗೂ ಆಯುಕ್ತರು ಅಥವಾ ನಿರ್ದೇಶಕರು, ಗಣಿ ಮತ್ತು ಭೂವಿಜ್ಞಾನ ಇಲಾಖೆಗಳ ಸದಸ್ಯರನ್ನೊಳಗೊಂಡ ರಾಜ್ಯ ಮಟ್ಟದ ಸಮಿತಿಯನ್ನು ರಚಿಸಲಾಗಿರುತ್ತದೆ.

ಆ) ಇದ್ದಲ್ಲಿ ವಿಶೇಷವಾಗಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಮರಳು ಮಾಫಿಯಾ ತಡೆಗಟ್ಟಲು ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ; (ವಿವರಗಳನ್ನು ನೀಡುವುದು)

- **ದಕ್ಷಿಣ ಕನ್ನಡ ಜಿಲ್ಲಾ ವ್ಯಾಪ್ತಿಯಲ್ಲಿ** ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಿಯಂತ್ರಿಸಲು ಜಿಲ್ಲಾ ಹಾಗೂ ತಾಲ್ಲೂಕು ಮರಳು ಸಮಿತಿಯ ಸದಸ್ಯ ಇಲಾಖೆಯ ಅಧಿಕಾರಿಗಳನ್ನೊಳಗೊಂಡ ತನಿಖಾ ತಂಡಗಳನ್ನು ರಚಿಸಿಕೊಂಡು ಪ್ರತಿದಿನ ಗಸ್ತು ಕಾರ್ಯಾಚರಣೆ ನಡೆಸಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ವಹಿಸಲಾಗುತ್ತಿದೆ.
- ಮುಂದುವರೆದು, ದಕ್ಷಿಣ ಕನ್ನಡ ಜಿಲ್ಲಾ ವ್ಯಾಪ್ತಿಯಲ್ಲಿ ಅನಧಿಕೃತ ಖನಿಜ ಸಾಗಾಣಿಕೆಯನ್ನು ತಡೆಗಟ್ಟುವ ಸಂಬಂಧ ಆಯಕಟ್ಟು ಪ್ರದೇಶಗಳಲ್ಲಿ ಸಿ.ಸಿ ಕ್ಯಾಮರಾ ಗಳನ್ನು ಅಳವಡಿಸಿ ಅನಧಿಕೃತ ಮರಳು ಸಾಗಾಣಿಕೆ ವಾಹನಗಳ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತಿದೆ.
- ಕಾರ್ಯವ್ಯಾಪ್ತಿಯ ಭೂವಿಜ್ಞಾನಿಗಳಿಗೆ ಹಗಲು-ರಾತ್ರಿ ಪಾಳಿಯಲ್ಲಿ ಕರ್ತವ್ಯ ನಿರ್ವಹಿಸಲು ಸೂಚಿಸಲಾಗಿದ್ದು, ಅದರಂತೆ ಕಾರ್ಯ ನಿರ್ವಹಿಸುತ್ತಿರುತ್ತಾರೆ.
- ಮರಳು ಗಣಿ ಗುತ್ತಿಗೆ ಹಾಗೂ ದಾಸ್ತಾನು ಕೇಂದ್ರಗಳಿಗೆ ಜಿಯೋಫೆನ್ಸಿಂಗ್ ಅಳವಡಿಸಿ, ಅನಧಿಕೃತ ಮರಳುಗಾರಿಕೆ ಮತ್ತು ಸಾಗಾಣಿಕೆ ನಡೆಯದಂತೆ ನಿಗಾವಹಿಸಲಾಗುತ್ತಿದೆ.
- ಅದರಂತೆ, ದಕ್ಷಿಣ ಕನ್ನಡ ಜಿಲ್ಲಾ ವ್ಯಾಪ್ತಿಯಲ್ಲಿ ಕಳೆದ 03 ವರ್ಷಗಳಲ್ಲಿ ಅನಧಿಕೃತ ಮರಳುಗಾರಿಕೆ / ಸಾಗಾಣಿಕೆ/ ದಾಸ್ತಾನು ಚಟುವಟಿಕೆಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದ್ದು, ವಿವರಗಳು ಈ ಕೆಳಕಂಡಂತಿರುತ್ತವೆ:

| ವರ್ಷ | ಪತ್ತೆ ಹಚ್ಚಿದ ಪ್ರಕರಣಗಳು | ಸಂಗ್ರಹವಾದ ದಂಡ (₹ಲಕ್ಷಗಳಲ್ಲಿ) | ದಾಖಲಾದ ಎಫ್.ಆರ್.ಆರ್ / ಪಿ.ಸಿ.ಆರ್. |
|---|---|---|---|
| 2022-23 | 269 | 145.62 | 8 |
| 2023-24 | 296 | 179.69 | 33 |
| 2024-25 (ಜನವರಿ ಅಂತ್ಯಕ್ಕೆ) | 173 | 54.04 | 82 |
| ಒಟ್ಟು | 738 | 379.35 | 123 |

- **ಉಡುಪಿ ಜಿಲ್ಲಾ ವ್ಯಾಪ್ತಿಯಲ್ಲಿ** ಅನಧಿಕೃತ ಮರಳು ಗಣಿಗಾರಿಕೆ/ ಸಾಗಾಣಿಕೆ/ ದಾಸ್ತಾನು ವಿರುದ್ಧ ಜಿಲ್ಲಾ ಹಾಗೂ ತಾಲ್ಲೂಕು ಮರಳು ಸಮಿತಿಯಿಂದ ತಹಶೀಲ್ದಾರರ ನೇತೃತ್ವದಲ್ಲಿ ಜಂಟಿ ತಂಡ ರಚನೆ ಮಾಡಲಾಗಿರುತ್ತದೆ.
- ಉಡುಪಿ ಜಿಲ್ಲಾ ವ್ಯಾಪ್ತಿಯಲ್ಲಿ ಮರಳು ಗಣಿಗುತ್ತಿಗೆ ಪ್ರದೇಶಗಳಲ್ಲಿ ಅನಧಿಕೃತ ಖನಿಜ ಸಾಗಾಣಿಕೆಯನ್ನು ತಡೆಗಟ್ಟಲು ತನಿಖಾ ಠಾಣೆಗಳನ್ನು ನಿರ್ಮಿಸಲಾಗಿದ್ದು, ಸಿ.ಸಿ ಕ್ಯಾಮರಾ -

. . . 3

-ಗಳನ್ನು ಅಳವಡಿಸಲಾಗಿರುತ್ತದೆ ಹಾಗೂ ಎಲ್ಲಾ ತನಿಖಾ ಠಾಣೆಗಳಲ್ಲಿ ಪೊಲೀಸ್ ಮತ್ತು ಗೃಹರಕ್ಷಕ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದು, ವಾಹನಗಳ ತಪಾಸಣೆ ಕಾರ್ಯ ನಿರ್ವಹಿಸಲಾಗುತ್ತಿದೆ.

- ಕಾರ್ಯವ್ಯಾಪ್ತಿ ಭೂವಿಜ್ಞಾನಿಗಳಿಗೆ ಹಗಲು-ರಾತ್ರಿ ಪಾಳಿಯಲ್ಲಿ ಕರ್ತವ್ಯ ನಿರ್ವಹಿಸಲು ಕಛೇರಿ ಆದೇಶವನ್ನು ಹೊರಡಿಸಲಾಗಿರುತ್ತದೆ.
- ಮರಳು ಗಣಿ ಗುತ್ತಿಗೆ ಹಾಗೂ ದಾಸ್ತಾನು ಕೇಂದ್ರಗಳಿಗೆ ಜಿಯೋಫೆನ್ಸಿಂಗ್ ಅಳವಡಿಸಿ, ಅನಧಿಕೃತ ಮರಳುಗಾರಿಕೆ ಮತ್ತು ಸಾಗಾಣಿಕೆ ನಡೆಯದಂತೆ ನಿಗಾವಹಿಸಲಾಗಿರುತ್ತದೆ.
- ಅದರಂತೆ, ಉಡುಪಿ ಜಿಲ್ಲಾ ವ್ಯಾಪ್ತಿಯಲ್ಲಿ ಕಳೆದ 03 ವರ್ಷಗಳಲ್ಲಿ ಅನಧಿಕೃತ ಮರಳುಗಾರಿಕೆ / ಸಾಗಾಣಿಕೆ / ದಾಸ್ತಾನು ಚಟುವಟಿಕೆಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದ್ದು, ವಿವರಗಳು ಈ ಕೆಳಕಂಡಂತಿರುತ್ತವೆ:

| ವರ್ಷ | ಪತ್ತೆ ಹಚ್ಚಿದ ಪ್ರಕರಣಗಳು | ಸಂಗ್ರಹವಾದ ದಂಡ (₹ಲಕ್ಷಗಳಲ್ಲಿ) | ದಾಖಲಾದ ಎಫ್.ಆರ್.ಆರ್/ ಪಿ.ಸಿ.ಆರ್. |
|---|---|---|---|
| 2022-23 | 341 | 78.81 | 1 |
| 2023-24 | 204 | 46.40 | 3 |
| 2024-25 (ಜನವರಿ ಅಂತ್ಯಕ್ಕೆ) | 103 | 19.07 | 0 |
| ಒಟ್ಟು | 648 | 144.28 | 4 |

ಇ) 2019 ರಿಂದ 2023ನೇ ಸಾಲಿನವರೆಗೆ ರಾಜ್ಯದಲ್ಲಿ ಎಷ್ಟು ಮೆಟ್ರಿಕ್ ಟನ್ ಮರಳು ಮಾಫಿಯಾ ಕುರಿತು ವರದಿ ಯಾಗಿದೆ; ಮತ್ತು ಇದರ ವಿರುದ್ಧ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ;

2019-20 ನೇ ಸಾಲಿನಿಂದ 2022-23ನೇ ಸಾಲಿನವರೆಗೆ ರಾಜ್ಯದಲ್ಲಿ ಒಟ್ಟು 1534 ಅನಧಿಕೃತ ಮರಳು ದಾಸ್ತಾನು ಪ್ರಕರಣಗಳನ್ನು ಪತ್ತೆ ಹಚ್ಚಿದ್ದು, ಸದರಿ ಪ್ರಕರಣಗಳಲ್ಲಿ 4,99,301 ಮೆಟ್ರಿಕ್ ಟನ್ ಮರಳನ್ನು ವಶಪಡಿಸಿಕೊಳ್ಳಲಾಗಿದ್ದು, ₹682 ಲಕ್ಷ ದಂಡದ ಮೊತ್ತವನ್ನು ವಸೂಲಿ ಮಾಡಲಾಗಿರುತ್ತದೆ ಮತ್ತು 716 ಪ್ರಕರಣಗಳನ್ನು ಸಂಬಂಧಪಟ್ಟ ಪೊಲೀಸ್ ಠಾಣೆ ಮತ್ತು ನ್ಯಾಯಾಲಯಗಳಲ್ಲಿ ದಾಖಲಿಸಲಾಗಿರುತ್ತದೆ.

ಈ) ಅಕ್ರಮ ಮರಳು ಗಣಿಗಾರಿಕೆ ನಿಯಂತ್ರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಏನು? (ಮಾಹಿತಿ ನೀಡುವುದು)

- ಅನಧಿಕೃತ ಮರಳು ಹಾಗೂ ಇತರೆ ಉಪಖನಿಜಗಳ ಗಣಿಗಾರಿಕೆಯನ್ನು ನಿಯಂತ್ರಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಟಾಸ್ಕ್‌ಫೋರ್ಸ್ (ಗಣಿ) ಸಮಿತಿ / ಮರಳು ಸಮಿತಿಯನ್ನು ರಚಿಸಲಾಗಿರುತ್ತದೆ.
- ಮೇಲ್ಕಂಡ ಸಮಿತಿಯಲ್ಲಿ ಕಂದಾಯ, ಪೊಲೀಸ್, ಅರಣ್ಯ, ಗಣಿ ಮತ್ತು ಭೂವಿಜ್ಞಾನ, ಪ್ರಾದೇಶಿಕ ಸಾರಿಗೆ ಇಲಾಖೆ ಹಾಗೂ ಇತರೆ ಇಲಾಖೆಗಳನ್ನೊಳಗೊಂಡ ಅಧಿಕಾರಿಗಳು ಸದಸ್ಯರುಗಳಾಗಿರುತ್ತಾರೆ.
- ಸದರಿ ಇಲಾಖೆಗಳ ಅಧಿಕಾರಿಗಳಿಗೆ ಅನಧಿಕೃತ ಉಪ ಖನಿಜಗಳ ಗಣಿಗಾರಿಕೆ ಚಟುವಟಿಕೆಗಳನ್ನು ನಿಯಂತ್ರಿಸಲು ಗಣಿ ಮತ್ತು-

. . . 4

| | | |
|---|---|---|
| | | -ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ, 1957ರ ಕಲಂ 21 ಮತ್ತು 22ರಡಿ ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994 ರ ನಿಯಮ 43 ಮತ್ತು 46 ರಂತೆ ಅನಧಿಕೃತ ಗಣಿಗಾರಿಕೆ ನಿಯಮ 31-R(12) ರಡಿ ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ಹಾಗೂ ನ್ಯಾಯಾಲಯಗಳಲ್ಲಿ ಮೊಕದ್ದಮೆ ದಾಖಲಿಸಲು ಅಧಿಕಾರ ಪ್ರತ್ಯಾಯೋಜಿಸಲಾಗಿರುತ್ತದೆ.<br>• ಅದರಂತೆ, ಆಯಾ ಜಿಲ್ಲಾ ವ್ಯಾಪ್ತಿಯಲ್ಲಿ ತನಿಖಾ ಠಾಣೆ ಹಾಗೂ ಚಾಲಿತದಳ ತಂಡವನ್ನು ರಚಿಸಿಕೊಂಡು ಅನಧಿಕೃತ ಉಪಖನಿಜಗಳ ಗಣಿಗಾರಿಕೆ / ಸಾಗಾಣಿಕೆ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ವಹಿಸಲಾಗುತ್ತಿದೆ.<br>• ಮರಳು ಹಾಗೂ ಇತರೆ ಉಪಖನಿಜ ಸಾಗಾಣಿಕೆ ವಾಹನಗಳ ಚಲನವಲನಗಳ ಮೇಲೆ ನಿಗಾವಹಿಸಲು ಕೇಂದ್ರೀಕೃತ One state One GPS ವ್ಯವಸ್ಥೆಯನ್ನು ಜಾರಿಗೊಳಿಸಲಾಗಿರುತ್ತದೆ.<br>• ಅನಧಿಕೃತ ಮರಳು ಹಾಗೂ ಇತರ ಉಪಖನಿಜಗಳ ಗಣಿಗಾರಿಕೆ / ಸಾಗಾಣಿಕೆ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು "ಖನಿಜ ಸಂರಕ್ಷಣಾ ಪಡೆ" ಯನ್ನು ಸ್ಥಾಪಿಸಲು ಕ್ರಮ ವಹಿಸಲಾಗುತ್ತಿದೆ.<br>• ಮೇಲ್ಕಂಡಂತೆ, ರಾಜ್ಯದಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ವಹಿಸಲಾಗಿರುತ್ತದೆ. |

ಸಂಖ್ಯೆ ಸಿಐ-ಎಂಎಂಎನ್/73/2025

**(ಎಸ್.ಎಸ್.ಮಲ್ಲಿಕಾರ್ಜುನ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.